# ದಿನಾಂಕ:28-08-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

**ವಿಷಯದ ಸಂಖ್ಯೆ: 8(73)/2010-11**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಎರಡು ಜಿಲ್ಲೆಗಳನ್ನೊಳಗೊಂಡಿರುತ್ತದೆ. ಕೆಟಿಪಿಪಿ ಸಂಗ್ರಹಣ ನಿಯಂತ್ರಣ ಅಧ್ಯಾಯ-2 ರ ಅಧಿನಿಯಮ-7 ರಲ್ಲಿ ಒಂದು ಇಲಾಖೆಯ ಸಂಗ್ರಹಣೆಯು ಒಂದಕ್ಕಿಂತ ಹೆಚ್ಚಿನ ಜಿಲ್ಲೆಗಳಿಗೆ ಸಂಬಂಧಪಡುತ್ತಿದ್ದರೆ ಸರ್ಕಾರವು ಅಧಿಸೂಚನೆಯ ಮೂಲಕ ಸಂಬಂಧಪಟ್ಟ ಇಲಾಖೆಯ ಸರ್ಕಾರದ ಉಪಕಾರ್ಯದರ್ಶಿ ಹುದ್ದೆಗೆ ಕಡಿಮೆಯಿಲ್ಲದ ಒಬ್ಬ ಅಧಿಕಾರಿಯನ್ನು ಆ ಇಲಾಖೆಯ ಸಂಬಂಧದಲ್ಲಿ ರಾಜ್ಯ ಟೆಂಡರ್ ಬುಲೆಟಿನ್ ಅಧಿಕಾರಿಯಾಗಿ ನೇಮಕ ಮಾಡಬಹುದೆಂಬ ನಿಯಮವಿರುತ್ತದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು 2 ಜಿಲ್ಲೆಗಳನ್ನೊಳಗೊಂಡಿದ್ದು, ಪಾಲಿಕೆಯ ಹಲವಾರು ಕಾಮಗಾರಿಯ ಟೆಂಡರ್ ಮೊತ್ತವು ರೂ.1.00 ಕೋಟಿಗಿಂತ ಅಧಿಕವಾಗಿರುವ ಸಂದರ್ಭದಲ್ಲಿ ಟೆಂಡರ್ ಪ್ರಕಟಣೆಯನ್ನು ರಾಜ್ಯ ಟೆಂಡರ್ ಬುಲೆಟಿನ್‌ನಲ್ಲಿ ಪ್ರಕಟಿಸುವಂತೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಕಾಯ್ದೆ, 1999 ರಲ್ಲಿ ಮತ್ತು 2000 ರಲ್ಲಿ ಹೇಳಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಕಾಮಗಾರಿಗಳ ತುರ್ತು ನಿರ್ವಹಣೆ ಸಲುವಾಗಿ ಪಾಲಿಕೆಗೆ ರಾಜ್ಯ ಟೆಂಡರ್ ಬುಲೆಟಿನ್ ಅಧಿಕಾರಿಯನ್ನು ನೇಮಿಸಿಕೊಳ್ಳಲು ಕೆಟಿಪಿಪಿ ಕಾಯ್ದೆ 2000 ರ ಅಧಿನಿಯಮದ ಅಧ್ಯಾಯ-2 ಕ್ರಮ ಸಂಖ್ಯೆ:7 ರಲ್ಲಿ ಅವಕಾಶ ಕಲ್ಪಿಸಿರುವುದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಪರ ಆಯುಕ್ತರು (ಆಡಳಿತ) ರವರನ್ನು ರಾಜ್ಯ ಟೆಂಡರ್ ಬುಲೆಟಿನ್ ಅಧಿಕಾರಿಯನ್ನಾಗಿ ನೇಮಕ ಮಾಡುವ ಬಗ್ಗೆ ಸರ್ಕಾರದ ಅಧಿಸೂಚನೆ ಹೊರಡಿಸುವಂತೆ ಘನ ಸರ್ಕಾರವನ್ನು ಕೋರಿರುವ ಬಗ್ಗೆ ಅನುಮೋದನೆ ಕೋರಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ: 18-08-2010 ರ ಟಿಪ್ಪಣಿ.

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ಆಯುಕ್ತರವರ ದಿನಾಂಕ:18-08-2010 ರ ಟಿಪ್ಪಣಿಯನ್ನು ಒಪ್ಪುವುದು".

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಆಯುಕ್ತರವರ ದಿನಾಂಕ:18-08-2010 ರ ಟಿಪ್ಪಣಿಯನ್ನು ಒಪ್ಪುವುದೆಂದು ತೀರ್ಮಾನಿಸಲಾಯಿತು".

ಎಸ್.ಕೆ.ನಟರಾಜ

(ಎಸ್.ಕೆ. ನಟರಾಜ)
ಮಹಾಪೌರರು